9



## ಕಂದಾಯ ಸಚಿವಾಲಯ

ವಿಷಯ : ಕಂದಾಯ ಭೂಮಿಯನ್ನು ರಕ್ಷಿಸಲು ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪ್ರಾಧಿಕಾರಗಳನ್ನು ರಚಿಸುವ ಬಗ್ಗೆ.

ಪ್ರಸ್ತಾವನೆ :

ದಿನಾಂಕ 26-9-2008ರಂದು ನಡೆದ ವಿಧಾನಸಭೆ ಭರವಸೆ ಸಮಿತಿ ಸಭೆಯಲ್ಲಿ ಕಂದಾಯ ಭೂಮಿಯ ಸಂರಕ್ಷಣೆಗಾಗಿ ಈ ಕೆಳಕಂಡಂತೆ ಕ್ರಮ ವಹಿಸಬೇಕೆಂದು ಸೂಚನೆ ನೀಡಲಾಗಿರುತ್ತದೆ.

> "ಸರ್ಕಾರಿ ಭೂಮಿಯನ್ನು ಒತ್ತುವರಿಯ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಕಂದಾಯ ಸಚಿವರು ಸದರಿ ಪ್ರಾಧಿಕಾರಗಳನ್ನು ಶೀಘ್ರವಾಗಿ ರಚಿಸಲಾಗುತ್ತದೆ ಎಂದು ಭರವಸೆ ಕೊಟ್ಟಿದ್ದು, ಇಲ್ಲಿಯವರೆಗೂ ಪ್ರಾಧಿಕಾರವು ರಚನೆ ಆಗದೆ ಇರುವುದರಿಂದ ಒಂದು ತಿಂಗಳ ಒಳಗಾಗಿ ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪ್ರಾಧಿಕಾರಗಳು ರಚನೆ ಆಗಬೇಕು."

ಮೇಲಿನ ಭರವಸೆ ಸಮಿತಿಯ ಸೂಚನೆ ಪ್ರಕಾರ ಈ ಕೆಳಕಂಡಂತೆ ಕಂದಾಯ ಇಲಾಖೆಯ ಭೂಮಿಯ ಸಂರಕ್ಷಣೆಗಾಗಿ ಪ್ರಾಧಿಕಾರಗಳನ್ನು ರಚಿಸಿ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ 82 ಎಲ್.ಜಿ.ಕ್ಯೂ. 99(ಪಿ1) ಬೆಂಗಳೂರು, ದಿನಾಂಕ: 13ನೇ ನವೆಂಬರ್ 2008.**

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಪರಿಶೀಲಿಸಿದ ನಂತರ ಸರ್ಕಾರವು ಸರ್ಕಾರಿ ಭೂಮಿಗಳನ್ನು ಸಂರಕ್ಷಿಸಲು ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಪ್ರಾಧಿಕಾರಗಳನ್ನು ಈ ಕೆಳಕಂಡಂತೆ ರಚಿಸಿ ಆದೇಶ ಹೊರಡಿಸಲಾಗಿದೆ.

### ರಾಜ್ಯ ಮಟ್ಟದ ಪ್ರಾಧಿಕಾರ

| | | |
|---|---|---|
| 1 | ಮಾನ್ಯ ಕಂದಾಯ ಸಚಿವರು | ಅಧ್ಯಕ್ಷರು |
| 2 | ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ | ಉಪಾಧ್ಯಕ್ಷರು |
| 3 | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಮುಖ್ಯ ಇಲಾಖೆಗಳು (ಅರಣ್ಯ ಇಲಾಖೆ, ಲೋಕೋಪಯೋಗಿ ಇಲಾಖೆ, ನೀರಾವರಿ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ ಇತ್ಯಾದಿ) | ಸದಸ್ಯರು |
| 4 | ಎಲ್ಲಾ ಪ್ರಾದೇಶಿಕ ಆಯುಕ್ತರುಗಳು | ಸದಸ್ಯರು |
| 5 | ಆಯುಕ್ತರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ | ಸದಸ್ಯರು |
| 6 | ಸೂಪರಿಂಟೆಂಡೆಂಟ್ ಆಫ್ ಪೊಲೀಸ್, ಬೆಂಗಳೂರು | ಸದಸ್ಯರು |
| 7 | ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆ, | ಸದಸ್ಯರು |
| 8 | ವಿಶೇಷ ಜಿಲ್ಲಾಧಿಕಾರಿಗಳು, (ಜಾರಿದಳ) ಬೆಂಗಳೂರು ನಗರ ಜಿಲ್ಲೆ | ಸದಸ್ಯ ಕಾರ್ಯದರ್ಶಿ |
| 9 | ಡೆಪ್ಯೂಟಿ ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್, Task Force, ಬೆಂಗಳೂರು | ಸದಸ್ಯರು |
| 10 | ಸಂಬಂಧಿಸಿದ ತಹಶೀಲ್ದಾರರು, ಬೆಂಗಳೂರು (ನ) ಮತ್ತು (ಗ್ರಾ) ಜಿಲ್ಲೆಗಳು | ಸದಸ್ಯರು |

### ಜಿಲ್ಲಾ ಮಟ್ಟದ ಪ್ರಾಧಿಕಾರ

| | | |
|---|---|---|
| 1 | ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| 2 | ಜಿಲ್ಲೆಯ ಸೂಪರಿಂಟೆಂಡೆಂಟ್ ಆಫ್ ಪೊಲೀಸ್ | ಸದಸ್ಯರು |
| 3 | ಉಪ ವಿಭಾಗಾಧಿಕಾರಿಗಳು | ಸದಸ್ಯ ಕಾರ್ಯದರ್ಶಿ |
| 4 | ತಾಂತ್ರಿಕ ಸಹಾಯಕರು ಮತ್ತು ಪದನಿಮಿತ್ತ ಭೂ ದಾಖಲೆಗಳ ಉಪ ನಿರ್ದೇಶಕರು | ಸದಸ್ಯರು |
| 5 | ಜಿಲ್ಲೆಯ ಎಲ್ಲಾ ತಹಶೀಲ್ದಾರರು | ಸದಸ್ಯರು |

| | | |
|---|---|---|
| 6 | ಸರ್ಕಾರಿ ಜಮೀನನ್ನು ಪಡೆದುಕೊಂಡಿರುವ ಪ್ರಮುಖ ಇಲಾಖೆಗಳ ಪ್ರತಿನಿಧಿಗಳು (ಅರಣ್ಯ ಇಲಾಖೆ, ಲೋಕೋಪಯೋಗಿ ಇಲಾಖೆ, ನೀರಾವರಿ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ ಇತ್ಯಾದಿ) | ಸದಸ್ಯರು |

**ತಾಲ್ಲೂಕು ಮಟ್ಟದ ಪ್ರಾಧಿಕಾರ**

| | | |
|---|---|---|
| 1 | ತಹಶೀಲ್ದಾರರು | ಅಧ್ಯಕ್ಷರು |
| 2 | ತಾಲ್ಲೂಕು ಮಟ್ಟದಲ್ಲಿ ಸರ್ಕಾರಿ ಜಮೀನನ್ನು ಪಡೆದುಕೊಂಡಿರುವ ಪ್ರಮುಖ ಇಲಾಖೆಗಳ ಪ್ರತಿನಿಧಿಗಳು (ಅರಣ್ಯ ಇಲಾಖೆ, ಲೋಕೋಪಯೋಗಿ ಇಲಾಖೆ, ನೀರಾವರಿ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ ಇತ್ಯಾದಿ) | ಸದಸ್ಯರು |

ಪ್ರಾಧಿಕಾರಿಗಳು ಈ ಕೆಳಕಂಡ ಅಂಶಗಳ ಬಗ್ಗೆ ಕಾರ್ಯ ನಿರ್ವಹಿಸತಕ್ಕದ್ದು.

1 ಸರ್ಕಾರಿ ಭೂಮಿಯ ಒತ್ತುವರಿಯನ್ನು ಪತ್ತೆಹಚ್ಚುವುದು

2 ಸರ್ಕಾರಿ ಭೂಮಿಯನ್ನು ಒತ್ತುವರಿಯಿಂದ ತೆರವುಗೊಳಿಸಿ ತ್ರೈಮಾಸಿಕ ವರದಿಯನ್ನು ಸಲ್ಲಿಸುವುದು.

3 ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 192(ಎ) ರಡಿಯಲ್ಲಿ ಅಪರಾಧ ಪ್ರಕರಣಗಳನ್ನು ದಾಖಲು ಮಾಡುವುದು.

ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಪ್ರಾಧಿಕಾರಗಳು ಜಿಲ್ಲಾಧಿಕಾರಿಗಳ ಮೂಲಕ ವರದಿಯನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.63

**ಇ. ಈಶ್ವರ್ ನಾಯಕ್**

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ (ಭೂ ಮಂಜೂರಾತಿ)

## ಕಾರ್ಮಿಕ ಸಚಿವಾಲಯ

**ವಿಷಯ :** ಶಿವಮೊಗ್ಗ ಜಿಲ್ಲೆಯ ಶಿರಾಳಕೊಪ್ಪ ಇಲ್ಲಿಗೆ ಮಂಜೂರು ಮಾಡಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಸಾಗರಕ್ಕೆ ಸ್ಥಳಾಂತರಿಸುವ ಬಗ್ಗೆ.

**ಓದಲಾಗಿದೆ:**

1. ಆದೇಶ ಸಂಖ್ಯೆ: ಕಾಇ 287 ಇಟಿಐ 2008(ಭಾಗ) ದಿನಾಂಕ 6-9-2008.
2. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಟಿಪ್ಪಣಿ ಸಂ: ಮುಮಕಾ/3026/08, ದಿನಾಂಕ 6-10-2008.
3. ಉದ್ಯೋಗ ಮತ್ತು ತರಬೇತಿ ಇಲಾಖೆಯ ಆಯುಕ್ತರ ಕಛೇರಿಯ ಪತ್ರ ಸಂಖ್ಯೆ: ಉತನಿ/ತರಬೇತಿ/ಯೋ-2/ವಿವ-04/2008-09, ದಿನಾಂಕ 17-10-2008.

**ಪ್ರಸ್ತಾವನೆ :**

ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ 2008-09ನೇ ಸಾಲಿನಲ್ಲಿ 10 ಸ್ಥಳಗಳಲ್ಲಿ ಹೊಸ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡಲಾಗಿತ್ತು. ಈ 10 ಸ್ಥಳಗಳ ಪೈಕಿ ಶಿರಾಳಕೊಪ್ಪ, ಶಿವಮೊಗ್ಗ ಜಿಲ್ಲೆ ಇಲ್ಲಿಗೆ ಹೊಸದಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಮಂಜೂರು ಮಾಡಲಾಗಿತ್ತು.

ಮೇಲೆ (2)ರಲ್ಲಿ ಓದಲಾದ ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಟಿಪ್ಪಣಿಯಲ್ಲಿ ಶಿರಾಳಕೊಪ್ಪ, ಶಿವಮೊಗ್ಗ ಜಿಲ್ಲೆ ಇಲ್ಲಿಗೆ ಬದಲಾಗಿ ಸಾಗರ, ಶಿವಮೊಗ್ಗ ಜಿಲ್ಲೆ ಇಲ್ಲಿಗೆ ಹೊಸ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಬದಲಾಯಿಸಲು ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಮಾನ್ಯ ಮುಖ್ಯಮಂತ್ರಿಯವರು ನಿರ್ದೇಶಿಸಿರುವುದಾಗಿ ತಿಳಿಸುತ್ತಾ, ಈ ಬಗ್ಗೆ ಪರಿಷ್ಕೃತ ಆದೇಶ ಜಾರಿ ಮಾಡಲು ಕೋರಿರುತ್ತಾರೆ.

ಅದರಂತೆ ಈ ಕೆಳಗಿನಂತೆ ಆದೇಶಿಸಿದೆ.